ಆ) ಎಷ್ಟು ಜನರಿಗೆ ಪರಿಹಾರ ಕೊಡಲಾಗಿದೆ?

ಶ್ರೀ ಬಿ. ರಾಚಯ್ಯ (ವ್ಯವಸಾಯ ಮತ್ತು ಅರಣ್ಯ ಮಂತ್ರಿಗಳು).—

ಅ) ೧೯೮೬-೮೭ ರಲ್ಲಿ ೩೭೯ ಪ್ರಕರಣಗಳು. ೧೯೮೭-೮೮ ರಲ್ಲಿ ೩೨೧ ಪ್ರಕರಣಗಳು. ೧೯೮೮-೮೯ ರಲ್ಲಿ ೧೩೭ ಪ್ರಕರಣಗಳು.

ಆ) ಮೇಲ್ಕಂಡ ಎಲ್ಲಾ ಪ್ರಕರಣಗಳಿಗೂ ಪರಿಹಾರ ಧನವನ್ನು ಮಂಜೂರು ಮಾಡಲಾಗಿದೆ.

ಬೀಟೆ ಮರಗಳ ಕಳ್ಳ ಸಾಗಾಣಿಕೆ

೩೦೬(೬೬೯) ಶ್ರೀ ಬಿ. ಸ್ವಾಮಿರಾವ್ (ಹೊಸನಗರ).—ಮಾನ್ಯ ವ್ಯವಸಾಯ ಮತ್ತು ಅರಣ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ :—

ಅ) ರಾಜ್ಯದಲ್ಲಿ ೧೯೮೬ ರಿಂದ ಈ ತನಕ ಅರಣ್ಯದಲ್ಲಿರುವ ಬೀಟೆ ಮರಗಳನ್ನು ಕಳ್ಳ ಸಾಗಾಣಿಕೆ ಮಾಡುತ್ತಿರುವುದು ನಿಜವೆ?

ಆ) ಅರಣ್ಯ ಇಲಾಖೆ ಸಿಬ್ಬಂದಿಗಳು ೧೯೮೭ ರಿಂದ ಈ ವರೆಗೆ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಿ ದಾಖಲು ಮಾಡಿದ್ದಾರೆ?

ಇ) ಎಷ್ಟು ಪ್ರಕರಣಗಳಲ್ಲಿ ಆರೋಪಿಗಳಿಗೆ ಶಿಕ್ಷೆ ವಿಧಿಸಲಾಗಿದೆ?

ಈ) ಎಷ್ಟು ಬೆಲೆಯ ಬೀಟೆ ಮರಗಳನ್ನು ಇಲ್ಲಿಯ ತನಕ ವಶಪಡಿಸಿಕೊಂಡಿದ್ದಾರೆ?

ಶ್ರೀ ಬಿ. ರಾಚಯ್ಯ (ವ್ಯವಸಾಯ ಮತ್ತು ಅರಣ್ಯ ಮಂತ್ರಿಗಳು).—

ಅ) ಗಮನಕ್ಕೆ ಬಂದಿದೆ.

ಆ) ೧೯೮೭ ರಿಂದ ಇಲ್ಲಿಯವರೆವಿಗೆ ಒಟ್ಟು ೫೬೭ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ.

ಇ) ೧೯ ಪ್ರಕರಣಗಳಲ್ಲಿ ಆರೋಪಿಗಳಿಗೆ ಶಿಕ್ಷೆ ವಿಧಿಸಲಾಗಿದೆ. ಬಾಕಿ ಪ್ರಕರಣಗಳು ತನಿಖೆಯಲ್ಲಿದೆ.

ಈ) ೧೫,೨೨,೦೦೦-೦೦ ರೂ. ಬೆಲೆ ಬಾಳುವ ಬೀಟೆ ಮರಗಳನ್ನು ವಶಪಡಿಸಿಕೊಳ್ಳಲಾಗಿದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಾಥಮಿಕ ಶಿಕ್ಷಕರ ಕೊರತೆ

೩೦೭(೬೮೩) ಶ್ರೀ ಬಿ. ಎಂ. ಇದಿನಬ್ಬ (ಉಳ್ಳಾಲ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ :—

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಖಾಲಿಯಿರುವ ಪ್ರಾಥಮಿಕ ಶಿಕ್ಷಕರ ಸಂಖ್ಯೆ ಎಷ್ಟು?

ಆ) ಈ ಕೊರತೆಯಿಂದ ಮಕ್ಕಳ ವಿದ್ಯಾಭ್ಯಾಸಕ್ಕೆ ತುಂಬಾ ತೊಂದರೆಯಾಗಿರುವುದು ಸರ್ಕಾರಕ್ಕೆ ತಿಳಿದಿದೆಯೇ?

ಇ) ಹಾಗಿದ್ದಲ್ಲಿ ಈ ಕೊರತೆ ನೀಗಿಸಲು ಕೈಗೊಂಡ ಕ್ರಮಗಳೇನು?

ಶ್ರೀ ಎಂ. ಚಂದ್ರಶೇಖರ್ (ಶಿಕ್ಷಣ ಸಚಿವರು).—

ಅ) ೨೪೦.

ಆ) ಹೌದು.

ಇ) ಖಾಲಿಯಿರುವ ಎಲ್ಲಾ ಹುದ್ದೆಗಳನ್ನು ಮತ್ತು ಕಪ್ಪು ಹಲಗೆ ಕಾರ್ಯಕ್ರಮದಡಿಯಲ್ಲಿ ಸೃಜಿಸಲಾದ ಎಲ್ಲಾ ಹುದ್ದೆಗಳನ್ನು ಮುಂದಿನ ಶೈಕ್ಷಣಿಕ ವರ್ಷ ಪ್ರಾರಂಭವಾಗುವುದರೊಳಗಾಗಿ ಭರ್ತಿ ಮಾಡಲು ಕ್ರಮ ಕೈಗೊಂಡಿದೆ.

ದಕ್ಷಿಣ ಕನ್ನಡದ ಇಂಗ್ಲೀಷ್ ಮತ್ತು ಕನ್ನಡ ಮಾಧ್ಯಮ ಶಾಲೆಗಳ ಬಗ್ಗೆ

೩೦೮(೬೮೪) ಶ್ರೀ ಬಿ. ಎಂ. ಇದಿನಬ್ಬ (ಉಳ್ಳಾಲ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ :—

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ೧೯೮೭-೮೮ನೇ ಸಾಲಿನಲ್ಲಿ ಸರ್ಕಾರ ಎಷ್ಟು ಇಂಗ್ಲೀಷ್ ಮತ್ತು ಕನ್ನಡ ಮಾಧ್ಯಮ ಶಾಲೆಗಳಿಗೆ ಅನುಮತಿ ನೀಡಿರುತ್ತದೆ.

ಆ) ಈ ರೀತಿ ಅನುಮತಿ ನೀಡುವಾಗ ಸರ್ಕಾರದವರು ಅನುಸರಿಸುವ ವಿಧಿವಿಧಾನಗಳೇನು?

ಇ) ಇಂಗ್ಲೀಷ್ ಶಾಲೆಗಳಿಗೆ ಅನುಮತಿ ನೀಡುವುದನ್ನು ಸರ್ಕಾರದವರು ನಿಲ್ಲಿಸಿರುವರೆ?

ಶ್ರೀ ಎಂ. ಚಂದ್ರಶೇಖರ್ (ಶಿಕ್ಷಣ ಸಚಿವರು).—

ಅ) ಆಂಗ್ಲ ಮಾಧ್ಯಮ ೧. ಕನ್ನಡ ಮಾಧ್ಯಮ ಇಲ್ಲ.

ಆ) ಅನುದಾನ ಸಂಹಿತೆಯ ನಿಯಮ-೧೨ ಮತ್ತು ಶಿಕ್ಷಣ ಇಲಾಖೆಯ ಸಂಬಂಧಪಟ್ಟ ಅಧಿಕಾರಿಗಳ ನಿರೀಕ್ಷಣಾ ವಿಧಾನ ಪಾಲಿಸುವುದು.

ಇ) ನ್ಯಾಯಾಲಯದ ಮುಂದೆ ಪ್ರಸ್ತಾಪಣವಿದ್ದ ಸದರಿ ಶೀರ್ಷಿಕೆಯನ್ನು ನಿರೀಕ್ಷಿಸಲಾಗಿದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಿಸಾನ್ ನರ್ಸರಿ ಯೋಜನೆ

೩೦೯(೬೮೫) ಶ್ರೀ ಬಿ. ಎಂ ಇದಿನಬ್ಬ (ಉಳ್ಳಾಲ).—ಮಾನ್ಯ ವ್ಯವಸಾಯ ಮತ್ತು ಅರಣ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ :—

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಿಸಾನ್ ನರ್ಸರಿ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಯಿತು?

ಆ) ಜಿಲ್ಲೆಯಲ್ಲಿ ಎಲ್ಲೆಲ್ಲಿ ಈ ಕಿಸಾನ್ ನರ್ಸರಿಯನ್ನು ಪ್ರಾರಂಭಿಸಲಾಗಿದೆ. (ವಿವರಗಳನ್ನು ಒದಗಿಸುವುದು)

ಇ) ಎಲ್ಲೆಲ್ಲಿ ಈ ಕಾರ್ಯಕ್ರಮಕ್ಕಾಗಿ ಎಷ್ಟೆಷ್ಟು ಹಣ ವೆಚ್ಚ ಮಾಡಲಾಗಿದೆ ಹಾಗೂ ಇದರ ಪ್ರಗತಿ ಯಾವ ಹಂತದಲ್ಲಿದೆ?

ಈ) ಈ ಯೋಜನೆಯಲ್ಲಿ ಸರಿಯಾದ ಫಲಾನುಭವಿಗಳಿಗೆ ಇದು ತಲುಪಿದೆಯೇ. ಎಲ್ಲಿ ಯಾದರೂ ಅವ್ಯವಹಾರಗಳು ನಡೆದಿವೆಯೇ?

ಉ) ಎಷ್ಟು ಫಲಾನುಭವಿಗಳಿಗೆ ಇದರಿಂದ ಲಾಭವಾಗಿದೆ ಹಾಗೂ ಜಯಪ್ರದವಾಗಿ ನಡೆಯುತ್ತಿದೆಯೇ?

ಶ್ರೀ ಬಿ. ರಾಚಯ್ಯ (ವ್ಯವಸಾಯ ಮತ್ತು ಅರಣ್ಯ ಮಂತ್ರಿಗಳು).—